# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 35 |
| ಮಾನ್ಯ ಸದಸ್ಯರ ಹೆಸರು | ಶ್ರೀ ವೈ.ಎಂ.ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ: | 12-09-2022 |
| ಉತ್ತರಿಸುವ ಸಚಿವರು | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು; ಅಲ್ಲಿನ ಜನಸಂಖ್ಯೆಯೊಂದಿಗೆ ವಿವರ ನೀಡುವುದು; ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳ ಮಾಹಿತಿಯನ್ನು ಜಿಲ್ಲಾವಾರು ತಾಲ್ಲೂಕುವಾರು ಪ್ರತ್ಯೇಕವಾಗಿ ನೀಡುವುದು. | ರಾಜ್ಯದಲ್ಲಿ ಒಟ್ಟು 2525 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.<br><br>ಗ್ರಾಮೀಣ ಪ್ರದೇಶದಲ್ಲಿ 2160 ಪ್ರಾಥಮಿಕ ಆರೋಗ್ಯ ಕೇಂದ್ರಗಳು. ನಗರ ಪ್ರದೇಶದಲ್ಲಿ ಒಟ್ಟು 365 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ<br><br>ಜನಸಂಖ್ಯೆವಾರು ಪ್ರಾಥಮಿಕ ಆರೋಗ್ಯ ಕೇಂದ್ರಗಳ ವಿವರಗಳು ಅನುಬಂಧ-1 ರಲ್ಲಿ ನೀಡಲಾಗಿದೆ.<br><br>ಬಳ್ಳಾರಿ ಜಿಲ್ಲೆಯಲ್ಲಿ ಒಟ್ಟು 38 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಆ ಪೈಕಿ 9 ನಗರ ಪ್ರದೇಶದಲ್ಲಿವೆ.<br><br>ವಿಜಯನಗರ ಜಿಲ್ಲೆಯಲ್ಲಿ ಒಟ್ಟು 54 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ (5 ನಗರ ಪ್ರದೇಶದಲ್ಲಿವೆ)<br><br>ತಾಲ್ಲೂಕುವಾರು ವಿವರವನ್ನು ಅನುಬಂಧ-2ರಲ್ಲಿ ನೀಡಲಾಗಿದೆ. |
| ಆ | ಸಮುದಾಯ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸಲು ಇರುವ ಮಾನದಂಡಗಳೇನು; (ಮಾಹಿತಿ ನೀಡುವುದು) | IPHS ನಾರ್ಮ್ಸ್ ಪ್ರಕಾರ ಸಮತಟ್ಟು ಪ್ರದೇಶದಲ್ಲಿ 1,20,000 ಜನಸಂಖ್ಯೆಗೆ ಹಾಗೂ ಗುಡ್ಡಗಾಡು ಪ್ರದೇಶದಲ್ಲಿ 80,000 ಜನಸಂಖ್ಯೆಗೆ ಒಂದು ಸಮುದಾಯ ಆರೋಗ್ಯ ಕೇಂದ್ರವನ್ನು ಸ್ಥಾಪಿಸಲು ಅವಕಾಶವಿರುತ್ತದೆ. (ವಿವರವನ್ನು ಅನುಬಂಧ-3 ರಲ್ಲಿ ನೀಡಲಾಗಿದೆ.) |

| | | |
|---|---|---|
| ಇ | ಒಂದು ಲಕ್ಷಕ್ಕಿಂತ ಹೆಚ್ಚಿನ ಜನಸಂಖ್ಯೆ ಇರುವ ಪ್ರದೇಶಗಳಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ನೀಡುವುದು) | ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸಮುದಾಯ ಆರೋಗ್ಯ ಕೇಂದ್ರ ಕೊರತೆಯಿದ್ದು, ಒಟ್ಟು 45 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಲು ಸ್ವೀಕೃತವಾದ ಪ್ರಸ್ತಾವನೆ ಪರಿಶೀಲನೆಯಲ್ಲಿದೆ<br><br>ಯೋಜನಾ ಇಲಾಖೆಯ ಆದೇಶ ಸಂಖ್ಯೆ: ಪಿಡಿಎಸ್/27/ಎಸ್ ಡಿ ಪಿ/2022, ದಿ: 05-07-2022ರ ಆದೇಶದಂತೆ ರಾಜ್ಯದಲ್ಲಿ 100 ಮಹತ್ವಾಕಾಂಕ್ಷಿ ತಾಲ್ಲೂಕುಗಳನ್ನು ಗುರುತಿಸಿದ್ದು, ಸದರಿ ತಾಲ್ಲೂಕುಗಳಲ್ಲಿ ಹೆಚ್ಚು ಕಾರ್ಯದೊತ್ತಡವಿರುವ 100 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. |

ಆಕುಕ 137 ಆಕುಕ ಎಸ್‌ಎಂಎಂ 2022

(ಡಾ|| ಕೆ.ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು